## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಿ.ಧನರಾಜ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಚಿಕ್ಕಮಗಳೂರು ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಕುರಿತು.

ಓದಲಾಗಿದೆ:- 1) ಮು.ಕಾ.ನಿ.ಅ., ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ:ಜಿಪಂಚಿ/ಆ-2/ಸಿಬ್ಬಂದಿ/ಸಿಆರ್/2015-16 ದಿ: 25.02.2016.

2) ಸರ್ಕಾರದ ಕಾರಣ ಕೇಳುವ ನೋಟೀಸ್ ದಿನಾಂಕ 21.06.2016

3) ಶ್ರೀ ಜಿ.ಧನರಾಜ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಚಿಕ್ಕಮಗಳೂರು ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ 21.07.2016.

4) ಮು.ಕಾ.ನಿ.ಅ., ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ:ಜಿಪಂಚಿ/ಆ-2/ಸಿಬ್ಬಂದಿ/ಸಿಆರ್67/2015-16/ದಿ:03.11.2016.

---

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ:-(1)ರ ಪತ್ರದಲ್ಲಿ ಶ್ರೀ ಜಿ.ಧನರಾಜ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಿಕ್ಕಮಗಳೂರು ಇವರ ಕಾರ್ಯ ವೈಖರಿ ತೃಪ್ತಿಕರವಾಗಿರುವುದಿಲ್ಲ ಅಲ್ಲದೆ ಸರ್ಕಾರದ ಕಾರ್ಯಕ್ರಮಗಳಾದ ನರೇಗಾ, ಸ್ವಚ್ ಭಾರತ ಮಿಷನ್, ಮತ್ತಿತರ ಪ್ರಮುಖ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಕಾಲದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಡ್ಡಿಯಾಗಿರುತ್ತಾರೆ ಹಾಗೂ ದಿನಾಂಕ 24.02.2016ರಂದು ನಡೆದ ಪ್ರಗತಿ ಪರಿಶೀಲನಾ ಸಭೆಗೆ ಗೈರುಹಾಜರಾಗಿರುವುದನ್ನು ಗಂಭೀರವಾಗಿ ಪರಿಗಣಿಸಿ, ಸದರಿಯವರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರುರವರು ಕೋರಿರುತ್ತಾರೆ. ಸದರಿ ಆರೋಪಗಳ ಬಗ್ಗೆ ಮೇಲೆ ಓದಲಾದ ಕ್ರಮ ಸಂಖ್ಯೆ:-(2)ರಲ್ಲಿ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮ 1957ರ ನಿಯಮ-12(1)(ಎ)ರಡಿ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿ, ಸದರಿ ನೋಟೀಸಿಗೆ ಆಪಾದಿತ ಅಧಿಕಾರಿಯು ದಿನಾಂಕ 03.09.2016ರಂದು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ಚಿಕ್ಕಮಗಳೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಜಿ.ಧನರಾಜ್, ಇವರು ಎಸಗಿದ ಕರ್ತವ್ಯಲೋಪಗಳಿಗೆ ಸಂಬಂಧಿಸಿದಂತೆ ದಿನಾಂಕ: 21.06.2016ರಂದು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 12(1)(ಎ) ರನ್ವಯ ಕಾರಣ ಕೇಳುವ ನೋಟಿಸನ್ನು ಜಾರಿ ಮಾಡಲಾಗಿದ್ದು, ಇದಕ್ಕೆ ಅಧಿಕಾರಿಯು ದಿನಾಂಕ: 21.07.2016ರಂದು ನೀಡಿರುವ ಲಿಖಿತ ರಕ್ಷಣಾ ಹೇಳಿಕೆಯಲ್ಲಿ ತಾಲ್ಲೂಕು ಪಂಚಾಯತ್ ಚುನಾವಣೆ ಸಂಬಂಧ ಚುನಾವಣಾಧಿಕಾರಿಯಾಗಿ ನೇಮಿಸಿದ್ದ ಕಾರಣ, ದಿನಾಂಕ 24.02.2016ರಂದು ನಡೆದ ಕೆ.ಡಿ.ಪಿ ಸಭೆಗೆ ಹಾಜರಾಗಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ಇದೇ ಸಂದರ್ಭದಲ್ಲಿ ಗೈರು ಹಾಜರಾಗಿದ್ದ ಕಡೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಶ್ರೀ ಹೆಚ್.ಆರ್.ಗೋಪಾಲಕೃಷ್ಣ,

ಇವರ ಪ್ರಕರಣದಲ್ಲಿ, ಸದರಿ ಅಧಿಕಾರಿಯನ್ನು ಸಹ ತಾಲ್ಲೂಕು ಪಂಚಾಯತಿಯ ಚುನಾವಣೆ 2016ರ ಸಂಬಂಧ ಅವರನ್ನು ಚುನಾವಣಾಧಿಕಾರಿಯನ್ನಾಗಿ ನೇಮಿಸಿದ್ದ ಕಾರಣ, ದಿನಾಂಕ 24.02.2016ರಂದು ಏರ್ಪಡಿಸಲಾಗಿದ್ದ ಕೆ.ಡಿ.ಪಿ ಸಭೆಗೆ ಹಾಜರಾಗಲು ಸಾಧ್ಯವಾಗಿರುವುದಿಲ್ಲವೆಂದು ಅಧಿಕಾರಿಯು ನೀಡಿದ್ದ ಲಿಖಿತ ರಕ್ಷಣಾ ಹೇಳಿಕೆಯನ್ನು ಪರಿಶೀಲಿಸಿ ಅಧಿಕಾರಿಗೆ ಎಚ್ಚರಿಕೆಯನ್ನು ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಬಹುದೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರುರವರು ಅಭಿಪ್ರಾಯಪಟ್ಟಿರುತ್ತಾರೆ.

ಒಂದೇ ರೀತಿಯ ಪ್ರಕರಣಗಳಲ್ಲಿ ವಿಭಿನ್ನ ನಿಲುವನ್ನು ತಾಳುವುದು ಸಮಂಜಸವಾಗಿರುವುದಿಲ್ಲ. ಈ ಪ್ರಕರಣದಲ್ಲಿ ಹಣಕಾಸಿನ ಅವ್ಯವಹಾರ ಇರುವುದಿಲ್ಲ. ಕೆ.ಡಿ.ಪಿ. ಸಭೆಗೆ ಗೈರು ಹಾಜರಾಗಿರುವುದಕ್ಕೆ ಸಂಬಂಧಿಸಿರುತ್ತದೆ. ಆದುದರಿಂದ, ಚಿಕ್ಕಮಗಳೂರು ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಶ್ರೀ ಜಿ.ಧನರಾಜ್, (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ತೀರ್ಥಹಳ್ಳಿ) ಇವರಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಾವಳಿಗಳು 1957ರ ನಿಯಮ 8(ii)ರನ್ವಯ ವಾಗ್ದಂಡನೆಯನ್ನು ವಿಧಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 44 ವಿಸೇಬಿ 2016 ದಿನಾಂಕ: 10.08.2017</u>**

ಶ್ರೀ ಜಿ.ಧನರಾಜ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಿಕ್ಕಮಗಳೂರು (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ತೀರ್ಥಹಳ್ಳಿ) ಇವರು ಎಸಗಿದ ಕರ್ತವ್ಯಲೋಪಗಳಿಗೆ ಸಂಬಂಧಿಸಿದಂತೆ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಾವಳಿಗಳು 1957ರ ನಿಯಮ 8(ii)ರನ್ವಯ ವಾಗ್ದಂಡನೆಯನ್ನು ವಿಧಿಸಿ, ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
12/8/17
(ಡಿ.ಎಸ್.ವಿಜಯ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**<u>ಇವರಿಗೆ:-</u>**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು/ಶಿವಮೊಗ್ಗ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ತೀರ್ಥಹಳ್ಳಿ.
3) ಸಂಬಂಧಿಸಿದ ಅಧಿಕಾರಿಗೆ.

**<u>ಪ್ರತಿ ಮಾಹಿತಿಗಾಗಿ:-</u>**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ(ಆಡಳಿತ-2)ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.